ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ,
ದಕ್ಷಿಣ ಕನ್ನಡ ಜಿಲ್ಲೆ,
ಮಂಗಳೂರು – 575 001.

ಕರ್ನಾಟಕ ಸರಕಾರ
GOVERNMENT OF KARNATAKA
( ಕಂದಾಯ ಇಲಾಖೆ )

Deputy Commissioner &
District Magistrate's Office,
Dakshina Kannada District,
Mangaluru – 575 001.

ನಂ. ಎಂಎಜಿ(2)ಸಿಆರ್ 156/2021/133465/ಸಿ4/48

ದಿನಾಂಕ: 15-10-2021

# ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಹಾಗೂ ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರ ನಡವಳಿ

ವಿಷಯ : 2021 ನೇ ಸಾಲಿನ ಅಕ್ಟೋಬರ್ ಮಾಹೆಯಲ್ಲಿ ನಡೆಯಲಿರುವ ಈದ್ ಮಿಲಾದ್ (ಮಿಲಾದುನ್ನಬಿ) ಆಚರಣೆ ಸಂದರ್ಭದಲ್ಲಿ ಕೋವಿಡ್-19 ಸೋಂಕು ಹರಡುವಿಕೆ ತಡೆಗಟ್ಟಲು ಮಾರ್ಗಸೂಚಿಗಳನ್ನು ಜಾರಿಗೊಳಿಸುವ ಬಗ್ಗೆ.

ಉಲ್ಲೇಖ : 1) ಸರ್ಕಾರದ ಆದೇಶ ಸಂಖ್ಯೆ: ಆರ್ ಡಿ 158 ಟಿಎನ್ಆರ್ 2020 ; ದಿನಾಂಕ: 24-09-2021.

2) ಈ ಕಛೇರಿ ಆದೇಶ ಸಂಖ್ಯೆ: ಎಂಎಜಿ(2)ಸಿಆರ್ 156/2021/133465/ಸಿ4/40 ; ದಿನಾಂಕ: 24-09-2021.

3) ಸರ್ಕಾರದ ಆದೇಶ ಸಂಖ್ಯೆ: ಕಂಇ 341 ಟಿಎನ್ಆರ್ 2021 ; ದಿನಾಂಕ: 07-10-2021.

=======@=======

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋವಿಡ್-19 ನಿಯಂತ್ರಣಕ್ಕೆ ಸಂಬಂಧಿಸಿದಂತೆ ಜಿಲ್ಲಾಡಳಿತವು ಉಲ್ಲೇಖ (1) ರ ಸರ್ಕಾರದ ನಿರ್ದೇಶನದಂತೆ ಕೋವಿಡ್-19 ಕಣ್ಗಾವಲು ನಿಯಂತ್ರಣ ಮತ್ತು ಜಾಗರೂಕತೆ ಮಾರ್ಗಸೂಚಿಗಳನ್ನು ಜ್ಯಾರಿಗೊಳಿಸಿದ್ದು, ಸದ್ರಿ ಮಾರ್ಗಸೂಚಿಗಳನ್ನು ಕಾಲಕಾಲಕ್ಕೆ ವಿಸ್ತರಿಸಿ ಈಗಾಗಲೇ ಉಲ್ಲೇಖ (2) ರಂತೆ ಆದೇಶಿಸಲಾಗಿರುತ್ತದೆ.

ಮುಂಬರುವ ದಿನಗಳಲ್ಲಿ 31ನೇ ಡಿಸೆಂಬರ್ 2021ರವರೆಗೆ ವಿವಿಧ ಹಬ್ಬಗಳ ಆಚರಣೆ ನಡೆಯಲಿದ್ದು, ಈ ಸಂದರ್ಭದಲ್ಲಿ ಜನರ ಒಗ್ಗೂಡುವಿಕೆ ಹೆಚ್ಚಾಗಿರುವುದರಿಂದ ಕೋವಿಡ್-19 ವೈರಾಣು ಹರಡುವಿಕೆ ತೀವ್ರಗೊಳ್ಳುವ ಸಾಧ್ಯತೆ ಇರುವುದರಿಂದ, ಸಕ್ರಿಯ ಪ್ರಕರಣಗಳು ಅಥವಾ ಹೆಚ್ಚಿನ ಪಾಸಿಟಿವಿಟಿ ದರವು ಉಲ್ಬಣಗೊಳ್ಳುವ ಪ್ರಾರಂಭಿಕ ಸುಳಿವಿನ ಮೇಲೆ ಹೆಚ್ಚಿನ ನಿಗಾ ಇರಿಸುವಂತೆ ಸೂಚಿಸಲಾಗಿದ್ದು. ರಾಜ್ಯದಲ್ಲಿ ಕೋವಿಡ್-19 ವೈರಾಣು ಸೋಂಕು ವ್ಯಾಪಕವಾಗಿ ಹರಡುವುದನ್ನು ತಡೆಯಲು ಕೇಂದ್ರಿಕೃತ ಕಣ್ಗಾವಲು ಪರೀಕ್ಷೆ - ಪತ್ತೆ - ಚಿಕಿತ್ಸೆ, ಲಸಿಕಾಕರಣ ಕಠಿಣವಾದ ಸೂಕ್ಷ್ಮ ನಿಯಂತ್ರಣ ಕ್ರಮಗಳು ಮತ್ತು ವೈರಾಣು ಹರಡುವಿಕೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಕೋವಿಡ್-19 ಸಮುಚಿತ ವರ್ತನೆಗಳನ್ನು ಕಟ್ಟುನಿಟ್ಟಾಗಿ ಅನುಸರಿಸುವುದನ್ನು ಮುಂದುವರಿಸುವಂತೆ ಆರೋಗ್ಯ ಪರಿಣಿತರು ಸೂಚಿಸಿರುತ್ತಾರೆ.

ಹಬ್ಬಗಳ ಕಾಲಾವಧಿಯಲ್ಲಿ ಜನ ಸಂಚಾರ ಮತ್ತು ಜನರ ಒಗ್ಗೂಡುವಿಕೆಗಳು ಹೆಚ್ಚಾಗುವುದರಿಂದ ಕೋವಿಡ-19 ವೈರಾಣು ಹರಡುವಿಕಯನ್ನು ತಡೆಗಟ್ಟಲು ಇನ್ನೂ ಹೆಚ್ಚಿನ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕಾದ ಅನಿವಾರ್ಯತೆ ಮತ್ತು ಅವಶ್ಯಕತೆ ಇರುತ್ತದೆ.

ಪ್ರವಾದಿ ಮೊಹಮ್ಮದ್ ರವರ ಹುಟ್ಟುಹಬ್ಬವನ್ನು ಈದ್ ಮಿಲಾದ್ ಹಬ್ಬವಾಗಿ ಮುಸ್ಲಿಂ ಸಮುದಾಯದವರು ಆಚರಿಸಲಿದ್ದು, ಈ ಹಬ್ಬವನ್ನು ಮೆರವಣಿಗೆ, ಜುಲೂಸ್, ಸಾಮುಹಿಕವಾಗಿ ಫಾತೇಹ, ಝಿಯಾರತ್ ಹಾಗೂ ಅನ್ನದಾನದೊಂದಿಗೆ ಸಾಂಪ್ರದಾಯಿಕವಾಗಿ ಆಚರಿಸಲಾಗುತ್ತದೆ. ಈ ಸಮಯದಲ್ಲಿ ಹೆಚ್ಚಿನ ಸಂಖ್ಯೆಯ ಜನರು ಒಂದೆಡೆ ಸೇರುವುದು ಸಾಮಾನ್ಯವಾಗಿರುತ್ತದೆ. ರಾಜ್ಯದಲ್ಲಿ

DISTRICT MAGISTRATE, D.K. GOVT. OF KARNATAKA ಕರ್ನಾಟಕ ಸರಕಾರ ಜಿಲ್ಲಾ ದಂಡಾಧಿಕಾರಿ, ದ.ಕ.

ಕೋವಿಡ್-19 ದೃಢ ಪ್ರಕರಣಗಳು ವರದಿಯಾಗುತ್ತಿರುವುದರಿಂದ ಈದ್ ಮಿಲಾದ್ ಹಬ್ಬವನ್ನು ಸರಳ ಮತ್ತು ಭಕ್ತಿ ಪೂರ್ವಕವಾಗಿ ಆಚರಿಸುವ ಸಂಬಂಧ ಸರ್ಕಾರವು ಮಾರ್ಗಸೂಚಿಗಳನ್ನು ಹೊರಡಿಸಿ ಉಲ್ಲೇಖ (3) ರಂತೆ ಆದೇಶಿಸಿರುತ್ತದೆ.

ಪ್ರಸ್ತುತ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋವಿಡ್-19 ಪಾಸಿಟಿವಿಟಿ ದರವು 1% ಕ್ಕಿಂತ ಕಡಿಮೆ ಇದ್ದು, ಕೋವಿಡ್-19 ಪಾಸಿಟಿವಿಟಿ ದರ ಏರಿಕೆಯಾಗದಂತೆ ಸದ್ರಿ ಆಚರಣೆಯನ್ನು ಸರಳ ಮತ್ತು ಭಕ್ತಿ ಪೂರ್ವಕವಾಗಿ ಆಚರಿಸಬೇಕಾಗಿರುತ್ತದೆ. ಆದ್ದರಿಂದ. ಸರ್ಕಾರದ ಆದೇಶದನ್ವಯ ಮತ್ತು ಜಿಲ್ಲೆಯ ಪ್ರಸಕ್ತ ವಿದ್ಯಮಾನಗಳನ್ನು ಅವಲೋಕಿಸಿ ಕೋವಿಡ್-19 ಸೋಂಕು ಹರಡುವಿಕೆಯನ್ನು ಪರಿಣಾಮಕಾರಿಯಾಗಿ ತಡೆಗಟ್ಟುವ ನಿಟ್ಟಿನಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ **ಡಾ|| ರಾಜೇಂದ್ರ ಕೆ.ವಿ.,** ಭಾ.ಆ.ಸೇ., **ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಹಾಗೂ ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ದಕ್ಷಿಣ ಕನ್ನಡ ಜಿಲ್ಲೆ,** ಮಂಗಳೂರು ಆದ ನಾನು ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34 ಹಾಗೂ ದಂಡ ಪ್ರಕ್ರಿಯಾ ಸಂಹಿತೆ 1973 ರ ಕಲಂ 144 (3) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈದ್ ಮಿಲಾದ್ ಹಬ್ಬವನ್ನು ಸರಳ ರೀತಿಯಲ್ಲಿ ಆಚರಿಸಲು ಈ ಕೆಳಗಿನ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸುವ ಷರತ್ತಿನೊಂದಿಗೆ ಅನುಮತಿಸಿ ಆದೇಶಿಸಿರುತ್ತೇನೆ.

1) ಕೋವಿಡ್-19 ವೈರಾಣು ಸೋಂಕು ಹರಡುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಪ್ರಸಕ್ತ ವರ್ಷದ ಈದ್ ಮಿಲಾದ್ ಹಬ್ಬವನ್ನು ಅತ್ಯಂತ ಸರಳವಾಗಿ ಮತ್ತು ಭಕ್ತಿ ಪೂರ್ವಕವಾಗಿ ಆಚರಿಸತಕ್ಕದ್ದು.
2) ಜಿಲ್ಲೆಯಾದ್ಯಂತ ಆಚರಿಸಲಿರುವ ಈದ್ ಮಿಲಾದ್ ಹಬ್ಬದ ಆಚರಣೆಯಲ್ಲಿ ಸಾಮೂಹಿಕ ಮೆರವಣಿಗೆ ನಿಷೇಧಿಸಿದೆ.
3) ಮೊಹಲ್ಲಾಗಳಲ್ಲಿ ನಡೆಯುವ ಯಾವುದೇ ರೀತಿಯ ಹಗಲು ಮತ್ತು ರಾತ್ರಿಯ ಪ್ರವಚನ ಕಾರ್ಯಕ್ರಮ / ಸಾಂಸ್ಕೃತಿಕ ಕಾರ್ಯಕ್ರಮ / ಸಭೆ ಸಮಾರಂಭಗಳಲ್ಲಿ 100 ಕ್ಕಿಂತ ಹೆಚ್ಚು ಜನರು ಒಮ್ಮೆಲೆ ಸೇರುವಂತಿಲ್ಲ ಹಾಗೂ ಸಾಮಾಜಿಕ ಅಂತರವನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
4) ಮಸೀದಿಗಳಲ್ಲಿ ಮತ್ತು ದರ್ಗಾಗಳಲ್ಲಿ ಸಾಮಾಜಿಕ ಅಂತರ ಹಾಗೂ ಕೋವಿಡ್-19 ರ ಶಿಷ್ಟಾಚಾರದೊಂದಿಗೆ ಸಾಕಷ್ಟು ಮುನ್ನೆಚ್ಚರಿಕೆ ಕ್ರಮಗಳ ಜೊತೆಗೆ ದೈಹಿಕ ಅಂತರ ಕಾಪಾಡಿಕೊಳ್ಳುವುದರ ಮೂಲಕ ಈದ್ ಮಿಲಾದ್ ಆಚರಣೆ ನೆರವೇರಿಸುವುದು.
5) ಸಾರ್ವಜನಿಕ ಪ್ರದೇಶಗಳಲ್ಲಿ ಧ್ವನಿವರ್ಧಕಗಳು / ಡಿಜಿಟಲ್ ಸೌಂಡ್ ಸಿಸ್ಟಮ್ (ಡಿಜೆ) ಬಳಕೆಯನ್ನು ನಿಷೇಧಿಸಲಾಗಿದೆ.
6) ಪ್ರಾರ್ಥನಾ ಸ್ಥಳಗಳಲ್ಲಿ ಮುಖಗವಸನ್ನು ಕಡ್ಡಾಯವಾಗಿ ಧರಿಸತಕ್ಕದ್ದು ಮತ್ತು ಮುಖಗವಸನ್ನುಧರಿಸದೆ ಸೇರತಕ್ಕಂತಹ ಸಾರ್ವಜನಿಕರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳತಕ್ಕದ್ದು.
7) 60 ವರ್ಷಕ್ಕಿಂತ ಮೇಲ್ಪಟ್ಟ ನಾಗರೀಕರು ಮತ್ತು 10 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಮನೆಯಲ್ಲಿಯೇ ಪ್ರಾರ್ಥನೆ ಮಾಡಿಕೊಂಡು ಹಬ್ಬವನ್ನು ಆಚರಿಸತಕ್ಕದ್ದು.
8) ಸ್ಯಾನಿಟೈಸೇಷನ್ ಹಾಗೂ ಹ್ಯಾಂಡ್ ವಾಷ್ ನೊಂದಿಗೆ ಕೈ ತೊಳೆಯಲು ಪ್ರವೇಶ ದ್ವಾರದಲ್ಲಿ ಸೂಕ್ತ ವ್ಯವಸ್ಥೆ ಮಾಡುವುದು.
9) ಕೋವಿಡ್-19 ಸಮುಚಿತ ವರ್ತನೆಗಳೊಂದಿಗೆ ಸಾಮುಹಿಕ ಪ್ರಾರ್ಥನೆಯನ್ನು ನಡೆಸತಕ್ಕದ್ದು. ಒಂದು ವೇಳೆ ಹೆಚ್ಚು ಜನರು ಆಗಮಿಸಿದಲ್ಲಿ, 2 ಅಥವಾ ಹೆಚ್ಚಿನ ಪಾಳಿಯಲ್ಲಿ ಸಾಮುಹಿಕ ಪ್ರಾರ್ಥನೆಯನ್ನು ನಡೆಸತಕ್ಕದ್ದು.
10) ಕೋವಿಡ್-19 ಸಮುಚಿತ ವರ್ತನೆಯಂತೆ ಮಸೀದಿಗಳಲ್ಲಿ ನಮಾಝ್ ನಿರ್ವಹಿಸುವವರ ಮಧ್ಯ ಕನಿಷ್ಠ 6 ಅಡಿ ಅಂತರ ಕಾಯ್ದುಕೊಳ್ಳತಕ್ಕದ್ದು. ಆಗಾಗ ಕೈಗಳನ್ನು ಸೋಪು ಮತ್ತು ಸ್ಯಾನಿಟೈಸರ್ ಗಳಿಂದ ಶುಚಿಗೊಳಿಸತಕ್ಕದ್ದು. ಮಸೀದಿಗಳಲ್ಲಿ ಪ್ರವೇಶಿಸುವ ಮೊದಲು ದೇಹದ ತಾಪಮಾನವನ್ನು ತಪಾಸಣೆ ಮಾಡತಕ್ಕದ್ದು.

Website: www.dk.nic.in Phone: 0824-2220588 Fax: 0824-2441564 Email:dc.mnglr@gmail.com

11) ಮಸೀದಿಗಳಲ್ಲಿ ಪ್ರಾರ್ಥನೆಯಲ್ಲಿ ಭಾಗವಹಿಸುವವರು ತಮ್ಮ ತಮ್ಮ ಮನೆಗಳಿಂದ ಮುಸಲ್ಲಾವನ್ನು (ಚಾಯನಮಾಜ್) ಕಡ್ಡಾಯವಾಗಿ ತರತಕ್ಕದ್ದು. ಪರಸ್ಪರ ಹಸ್ತಲಾಘವ ಮತ್ತು ಆಲಿಂಗನಗಳನ್ನು ಮಾಡತಕ್ಕದಲ್ಲ.

12) ಮಸೀದಿಗಳನ್ನು ಹೊರತುಪಡಿಸಿ ಇತರ ಯಾವುದೇ ಸಾರ್ವಜನಿಕ ಸ್ಥಳಗಳಲ್ಲಿ ಅಂದರೆ ಸಭಾಂಗಣ, ಸಮುದಾಯ ಭವನ, ಶಾದಿಮಹಲ್ ಮತ್ತಿತರ ತೆರದ ಜಾಗಗಳಲ್ಲಿ ಈದ್ ಮಿಲಾದ್ ಹಬ್ಬದ ಪ್ರಯುಕ್ತ ಸಾಮುಹಿಕ ಪ್ರಾರ್ಥನೆಯನ್ನು ಆಯೋಜಿಸುವಂತಿಲ್ಲ.

13) ಖಬರಸ್ಥಾನದಲ್ಲಿ ಈದ್ ಮಿಲಾದ್ ಪ್ರಯುಕ್ತ ಯಾವುದೇ ರೀತಿಯ ಮೆರವಣಿಗೆ / ಸಾರ್ವಜನಿಕ ಸ್ಥಳಗಳಲ್ಲಿ ಬಾಹ್ಯ ಮತ್ತು ತೆರೆದ ಜಾಗದಲ್ಲಿ ಸಾಮೂಹಿಕ ಪ್ರಾರ್ಥನೆ, ಪ್ರವಚನ ಮುಂತಾದವುಗಳನ್ನು ಆಯೋಜಿಸುವಂತಿಲ್ಲ.

14) ಕೋವಿಡ್ ಸಮುಚಿತ ವರ್ತನೆಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂತಹವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 51 ರಿಂದ 60 ರನ್ವಯ, ಐಪಿಸಿ ಕಲಂ 188 ರಂತೆ ಮತ್ತು ಕರ್ನಾಟಕ ಸಾಂಕ್ರಾಮಿಕ ರೋಗಗಳ ಅಧಿನಿಯಮ 2020 ರ ಕಲಂ 4, 5 ಮತ್ತು 10 ರಂತೆ ಕ್ರಮ ಜರಗಿಸಲಾಗುವುದು.

ಈ ಆದೇಶವನ್ನು ದಿನಾಂಕ: 15-10-2021 ರಂದು ನನ್ನ ಸ್ವಹಸ್ತಾಕ್ಷರ ಮತ್ತು ಮುದ್ರೆಯೊಂದಿಗೆ ಹೊರಡಿಸಲಾಗಿದೆ.

DISTRICT MAGISTRATE, D.K. GOVT. OF KARNATAKA ಕರ್ನಾಟಕ ಸರಕಾರ ಜಿಲ್ಲಾ ದಂಡಾಧಿಕಾರಿ, ದ.ಕ.

ಡಾ|| ರಾಜೇಂದ್ರ ಕೆ.ವಿ., ಭಾ.ಆ.ಸೇ.
ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,
ಹಾಗೂ ಅಧ್ಯಕ್ಷರು,
ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ರಿಗೆ,

1. ಪೊಲೀಸ್ ಆಯುಕ್ತರು, ಮಂಗಳೂರು ನಗರ.
2. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು.
3. ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
4. ಆಯುಕ್ತರು, ಮಹಾನಗರ ಪಾಲಿಕೆ, ಮಂಗಳೂರು.
5. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
6. ಸಹಾಯಕ ಆಯುಕ್ತರು, ಮಂಗಳೂರು / ಪುತ್ತೂರು ಉಪವಿಭಾಗ.
7. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
8. ಜಿಲ್ಲಾ ವಕ್ಫ್ ಅಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
9. ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳಿಗೆ.
10. ಜಿಲ್ಲೆಯ ಎಲ್ಲಾ ತಾಲೂಕು ಆರೋಗ್ಯಾಧಿಕಾರಿಗಳಿಗೆ.
11. ಎಲ್ಲಾ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳಿಗೆ.

12. ಹಿರಿಯ ಸಹಾಯಕ ನಿರ್ದೇಶಕರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು - ಇವರು ಜಿಲ್ಲೆಯ ಎಲ್ಲಾ ಪ್ರಮುಖ ಸುದ್ದಿ ಮಾಧ್ಯಮಗಳಲ್ಲಿ ಪ್ರಚುರ ಪಡಿಸಲು ತಿಳಿಸಿದೆ.

DISTRICT MAGISTRATE, D.K.
GOVT. OF KARNATAKA

Website: www.dk.nic.in Phone: 0824-2220588 Fax: 0824-2441564 Email:dc.mnglr@gmail.com